# ನೈತಿಕ ಬುನಾದಿ ಗಟ್ಟಿಯಾಗಿರಲಿ: ಸ್ವರ್ಣವಲ್ಲೀ ಶ್ರೀ

ಪ್ರಜಾವಾಣಿ ವಾರ್ತೆ

**ಶಿರಸಿ:** ರಾಷ್ಟ್ರ ನಿರ್ಮಾಣದಲ್ಲಿ ವಿದ್ಯಾರ್ಥಿಗಳನ್ನು ಸಮರ್ಥರನ್ನಾಗಿ ಮಾಡುವುದೇ ನಮ್ಮ ಧ್ಯೇಯ. ಆ ಧ್ಯೇಯ ಇಟ್ಟುಕೊಂಡು 18 ವರ್ಷಗಳಿಂದ ಶ್ರೀನಿಕೇತನ ಸಂಸ್ಥೆಯನ್ನು ನಡೆಸಿಕೊಂಡು ಬಂದಿದ್ದೇವೆ ಎಂದು ಸೋಂದಾ ಸ್ವರ್ಣವಲ್ಲೀ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಹೇಳಿದರು.

ಇಲ್ಲಿನ ಇಸಳೂರಿನಲ್ಲಿರುವ ಶ್ರೀನಿಕೇತನ ಶಾಲೆಯ ನೂತನ ತರಗತಿ ಕೊಠಡಿಗಳ ನಿರ್ಮಾಣಕ್ಕೆ ಬುಧವಾರ ಭೂಮಿಪೂಜೆ ನೆರವೇರಿಸಿ ಆಶೀರ್ವಚನ ನೀಡಿದರು. ಶ್ರೀನಿಕೇತನ ಶಾಲೆಯಲ್ಲಿ ಇದುವರೆಗೆ ಹತ್ತನೇ ತರಗತಿವರೆಗೆ ಮಾತ್ರ ವಿದ್ಯಾಭ್ಯಾಸ ಮಾಡಲು ಅವಕಾಶವಿತ್ತು. ಇನ್ನು ಮುಂದೆ 12ನೇ ತರಗತಿವರೆಗೂ ವ್ಯಾಸಂಗ ಮಾಡಲು ಅವಕಾಶ ಕಲ್ಪಿಸಲಾಗುತ್ತದೆ. ಅದಕ್ಕಾಗಿಯೇ ಸುಮಾರು ₹4ಕೋಟಿ ವೆಚ್ಚದಲ್ಲಿ ಕೊಠಡಿಗಳನ್ನು ನಿರ್ಮಿಸಲಾಗುತ್ತಿದೆ ಎಂದರು.

ನೈತಿಕವಾಗಿ ಸರಿಯಿರುವವರ ಸಂಖ್ಯೆ ಕಡಿಮೆ ಇದೆ. ನೈತಿಕತೆಯ ಬುನಾದಿ ಗಟ್ಟಿಯಾಗಿದ್ದರೆ ರಾಷ್ಟ್ರ ನಿರ್ಮಾಣ ಸಾಧ್ಯವಾಗುತ್ತದೆ. ಪಿಯುಸಿ ಹಂತ ವಿದ್ಯಾರ್ಥಿಗಳ ಜೀವನದ ನಿರ್ಣಾಯಕ ಘಟ್ಟವಾಗಿದೆ. ಈ ಘಟ್ಟವನ್ನು ಸರಿಯಾಗಿ ನಿರ್ಮಾಣ ಮಾಡಿಕೊಟ್ಟರೆ ವಿದ್ಯಾರ್ಥಿಗಳ ಜೀವನ ಉಜ್ವಲವಾಗುತ್ತದೆ ಎಂದು ಹೇಳಿದರು.

ಶ್ರೀನಿಕೇತನ ಶಾಲಾ ಆಡಳಿತ ಮಂಡಳಿ ಅಧ್ಯಕ್ಷ ಮೇಜರ್ ರಘುನಂದನ ಹೆಗಡೆ, ಕಾರ್ಯದರ್ಶಿ ಕೆ.ಎನ್.ಹೊಸಮನಿ, ಆಡಳಿತ ಮಂಡಳಿ ಸದಸ್ಯ ಕೇಶವ ಖೂರ್ಸೆ, ರಾಜರಾಜೇಶ್ವರಿ ವಿದ್ಯಾಸಂಸ್ಥೆ ಉಪಾಧ್ಯಕ್ಷ ಡಾ.ಎಂ.ಜಿ.ಹೆಗಡೆ, ಕಾರ್ಯದರ್ಶಿ ಶಿವರಾಮ ಭಟ್, ಪ್ರಾಚಾರ್ಯ ವಸಂತ ಭಟ್ ಹಾಗೂ ಆಡಳಿತ ಮಂಡಳಿ ಸದಸ್ಯರು ಶಾಲಾ ಶಿಕ್ಷಕವೃಂದ ಹಾಗೂ ವಿದ್ಯಾರ್ಥಿಗಳು ಇದ್ದರು.



ಇಸಳೂರಿನಲ್ಲಿರುವ ಶ್ರೀನಿಕೇತನ ಶಾಲೆಯ ನೂತನ ತರಗತಿ ಕೊಠಡಿಗಳ ನಿರ್ಮಾಣಕ್ಕೆ ಸ್ವರ್ಣವಲ್ಲೀ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಭೂಮಿಪೂಜೆ ನೆರವೇರಿಸಿದರು